ಕರ್ನಾಟಕ ಸರ್ಕಾರ
(ಪೊಲೀಸ್ ಇಲಾಖೆ)

ಸಂಖ್ಯೆ:96/ಪಿಆರ್‌ಓ/ಸಿಓಪಿ/2026.

ಪೊಲೀಸ್ ಆಯುಕ್ತರವರ ಕಛೇರಿ,
ಬೆಂಗಳೂರು ನಗರ,
ದಿನಾಂಕ:29/10/2026.

# ಪತ್ರಿಕಾ ಪ್ರಕಟಣೆ

## ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸ್ಟಿಂಗ್ ಎನ್ನಲಾದ ವಿಡಿಯೋ ಹಾಗೂ ಅದರ ಪ್ರಸಾರದ ಪ್ರಕರಣದ (ಸಿಸಿಪಿಎಸ್ ಮೊ.ಸಂ. 56/2026) ತನಿಖೆಯ ಕುರಿತು.

ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸ್ಟಿಂಗ್ ಎನ್ನಲಾದ ವಿಡಿಯೋಗೆ ಸಂಬಂಧಿಸಿದಂತೆ ಮಾಧ್ಯಮಗಳಲ್ಲಿ ವ್ಯಾಪಕ ವರದಿಗಳು ಪ್ರಕಟವಾಗುತ್ತಿರುವುದು, ಸಾರ್ವಜನಿಕ ವಲಯದಲ್ಲಿ ವಿವಿಧ ರೀತಿಯ ಊಹಾಪೋಹಗಳು ಕಾರಣವಾಗಿರುವುದು ಹಾಗೂ ಈ ವಿಡಿಯೋ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ಪ್ರಸಾರವಾಗುತ್ತಿರುವ ಹಿನ್ನೆಲೆಯಲ್ಲಿ, ಸೈಬರ್ ಕ್ರೈಂ ಪೊಲೀಸ್ ಠಾಣೆ ಮೊ.ಸಂ. 56/2026 ರಲ್ಲಿ ತನಿಖೆಯಲ್ಲಿರುವ ಪ್ರಕರಣದ ಪ್ರಗತಿಯ ಕುರಿತಾದ ಸ್ಪಷ್ಟೀಕರಣವನ್ನು ಬೆಂಗಳೂರು ನಗರ ಪೊಲೀಸ್ ವತಿಯಿಂದ ಸಾರ್ವಜನಿಕರ ಗಮನಕ್ಕೆ ತರಲು ಬಯಸಿದೆ.

ಈ ರೀತಿಯ ವಿಡಿಯೋವನ್ನು ಸೃಷ್ಟಿಸಿದ, ಚಿತ್ರೀಕರಿಸಿದ, ತಮ್ಮ ವಶದಲ್ಲಿ ಇರಿಸಿಕೊಂಡು, ಇತರರಿಗೆ ವರ್ಗಾಯಿಸಿದ ಹಾಗೂ ತದನಂತರ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ಪ್ರಸಾರ ಮಾಡಿದ ಸಂದರ್ಭಗಳು ಮತ್ತು ಅವುಗಳಿಗೆ ಸಂಬಂಧಿಸಿದ ವ್ಯಕ್ತಿಗಳ ಪಾತ್ರದ ಕುರಿತು ಸಮಗ್ರ ತನಿಖೆ ಕೈಗೊಳ್ಳಲಾಗುತ್ತಿದೆ.

ಈವರೆಗೆ ಸಂಗ್ರಹಿಸಲಾದ ಸಾಕ್ಷ್ಯಾಧಾರಗಳು ಮತ್ತು ದಾಖಲಿಸಲಾದ ಹೇಳಿಕೆಗಳ ಆಧಾರದಲ್ಲಿ, ವಿಡಿಯೋದಲ್ಲಿ ಬಿಂಬಿಸಿರುವಂತೆ ಲೈಂಗಿಕ ದೌರ್ಜನ್ಯದ ಆರೋಪಗಳು ಕಟ್ಟುಕಥೆಯ ಭಾಗವಾಗಿದ್ದು, ಉದ್ದೇಶಪೂರ್ವಕವಾಗಿ ಸೃಷ್ಟಿಸಲಾದ ನಿರೂಪಣೆಯಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ವಿಡಿಯೋದಲ್ಲಿ ಚಿತ್ರಿಸಿರುವ ರೀತಿಯಲ್ಲಿ ಯಾವುದೇ ಘಟನೆ ನಡೆದಿರುವ ಬಗ್ಗೆ ಈವರೆಗಿನ ತನಿಖೆಯಲ್ಲಿ ದಾಖಲಿಸಲಾದ ಹೇಳಿಕೆಗಳು ಹಾಗೂ ಸಂಗ್ರಹಿಸಲಾದ ಸಾಕ್ಷ್ಯಾಧಾರಗಳು ದೃಢಪಡಿಸುವುದಿಲ್ಲ.

ವಿಡಿಯೋದಲ್ಲಿ ಕಾಣಿಸಿಕೊಂಡಿರುವ ಎಲ್ಲಾ ವ್ಯಕ್ತಿಗಳನ್ನು ಗುರುತಿಸಲಾಗಿದ್ದು, ಅವರ ವಿಚಾರಣೆಯನ್ನು ಸಮಗ್ರವಾಗಿ ನಡೆಸಲಾಗಿದ್ದು, ಕೆಲವರನ್ನು ಒಂದಕ್ಕಿಂತ ಹೆಚ್ಚು ಬಾರಿ ವಿಚಾರಣೆಗೊಳಪಡಿಸಲಾಗಿದೆ. ಅವರ ಹೇಳಿಕೆಗಳು ಹಾಗೂ ಈವರೆಗೆ ಸಂಗ್ರಹಿಸಲಾದ ಸಾಕ್ಷ್ಯಾಧಾರಗಳ ಆಧಾರದ ಮೇರೆಗೆ, ವಿಡಿಯೋದಲ್ಲಿ ಉಲ್ಲೇಖಿಸಲಾದ ಅಥವಾ ಸೂಚ್ಯವಾಗಿ ಆರೋಪಿಸಲಾದ ವ್ಯಕ್ತಿಗಳ ವಿರುದ್ಧದ ಆರೋಪಗಳು ಸುಳ್ಳು ಹಾಗೂ ಕಟ್ಟುಕಥೆಯಿಂದ ಕೂಡಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ.

ಈ ಎಲ್ಲ ಅಂಶಗಳ ಕುರಿತು ಹೆಚ್ಚಿನ ತನಿಖೆ ಮುಂದುವರಿದಿದೆ.

**ವಿಡಿಯೋದ ಮೂಲ ಮತ್ತು ನೈಜತೆಯ ಕುರಿತು:**

ಸದರಿ ವಿಡಿಯೋವನ್ನು ಚಿತ್ರೀಕರಿಸಲು ಬಳಸಲಾಗಿದೆ ಎನ್ನಲಾದ ಮೂಲ ಮೊಬೈಲ್ ಫೋನ್ ಅನ್ನು ಪತ್ತೆಹಚ್ಚಿ, ಜಪ್ತಿ ಮಾಡಲಾಗಿದೆ. ವಿಡಿಯೋದ ನೈಜತೆ, ಸಮಗ್ರತೆ ಹಾಗೂ ಚಿತ್ರೀಕರಣಕ್ಕೆ ಸಂಬಂಧಿಸಿದ ಇತರೆ ತಾಂತ್ರಿಕ ಅಂಶಗಳನ್ನು ದೃಢಪಡಿಸುವ ಉದ್ದೇಶದಿಂದ ಮೊಬೈಲ್ ಫೋನ್ ಅನ್ನು ವಿಧಿವಿಜ್ಞಾನ ಪರೀಕ್ಷೆಗೆ ಕಳುಹಿಸಲಾಗಿದ್ದು, ವರದಿ ಇನ್ನಷ್ಟೇ ಬರಬೇಕಾಗಿದೆ.

ಗಮನಾರ್ಹ ಸಂಗತಿಯೆಂದರೆ, 2011ರಲ್ಲಿ ನಡೆದಿದೆ ಎನ್ನಲಾದ ಘಟನೆಯೊಂದಕ್ಕೆ ಸಂಬಂಧಿಸಿದಂತೆ ಈ ವಿಡಿಯೋವನ್ನು ಸುಮಾರು 12 ವರ್ಷಗಳ ನಂತರ, ಅಂದರೆ 2023ರಲ್ಲಿ ಚಿತ್ರೀಕರಿಸಲಾಗಿದೆ ಎಂದು ಹೇಳಲಾಗುತ್ತಿದೆ.

ಈ ಘಟನೆ ನಡೆದ ಸುಮಾರು 12 ವರ್ಷಗಳ ನಂತರ ಚಿತ್ರೀಕರಿಸಿರುವ ವಿಡಿಯೋವನ್ನು ಯಾವ ಸಂದರ್ಭಗಳಲ್ಲಿ ಹಾಗೂ ಯಾವ ಉದ್ದೇಶದಿಂದ ಚಿತ್ರೀಕರಿಸಲಾಯಿತು, ಅದರ ಸೃಷ್ಟಿಯಲ್ಲಿ ಭಾಗಿಯಾಗಿರುವ ವ್ಯಕ್ತಿಗಳು ಯಾರು, ಅವರ ಪಾತ್ರವೇನು ಮತ್ತು ಅದರ ಹಿಂದಿರುವ ಸಂಭವನೀಯ ಉದ್ದೇಶಗಳೇನು ಎಂಬ ಎಲ್ಲ ಅಂಶಗಳ ಕುರಿತಾದ ಕೂಲಂಕುಷ ತನಿಖೆ ನಡೆಸಲಾಗುತ್ತಿದೆ.

ತಪ್ಪುದಾರಿಗೆಳೆಯುವಂತಹ ನಿರೂಪಣೆಯನ್ನು ಸೃಷ್ಟಿಸುವ ಹಾಗೂ ದುರುದ್ದೇಶಗಳನ್ನು ಈಡೇರಿಸುವ ಉದ್ದೇಶದಿಂದ ವಿಡಿಯೋವನ್ನು ಪೂರ್ವಯೋಜಿತವಾಗಿ ಚಿತ್ರೀಕರಿಸಲಾಗಿದೆಯೇ, ಕೃತಕವಾಗಿ ಸೃಷ್ಟಿಸಲಾಗಿದೆಯೇ ಅಥವಾ ತಿರುಚಲಾಗಿದೆಯೇ ಎಂಬುದನ್ನು ಪತ್ತೆಹಚ್ಚುವುದು ತನಿಖೆಯ ಪ್ರಮುಖ ಅಂಶವಾಗಿದೆ.

## **ವಿಡಿಯೋ ಪ್ರಸಾರ ಮತ್ತು ಡಿಜಿಟಲ್ ಜಾಡಿನ ಕುರಿತು:**

ಸದರಿ ವಿಡಿಯೋ ಚಿತ್ರೀಕರಣಗೊಂಡ ನಂತರ ಅದು ಯಾರ ವಶದಲ್ಲಿತ್ತು, ಯಾರಿಂದ ಯಾರಿಗೆ ವರ್ಗಾಯಿಸಲಾಯಿತು ಹಾಗೂ ಅಂತಿಮವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಅಪ್‌ಲೋಡ್ ಮಾಡಿದ ವ್ಯಕ್ತಿಗಳ ಕೈಗೆ ಹೇಗೆ ತಲುಪಿತು ಎಂಬ ಅಂಶಗಳ ಕುರಿತು ತನಿಖೆ ನಡೆಸಲಾಗುತ್ತಿದೆ.

2023ರಲ್ಲಿ ವಿಡಿಯೋ ಚಿತ್ರೀಕರಣಗೊಂಡ ಸಮಯದಿಂದ 2026ರ ಸೆಪ್ಟೆಂಬರ್–ಅಕ್ಟೋಬರ್ ತಿಂಗಳುಗಳಲ್ಲಿ ಅಂತರ್ಜಾಲದಲ್ಲಿ ಪ್ರಸಾರವಾಗುವವರೆಗಿನ ವಿಡಿಯೋದ ಸಂಪೂರ್ಣ ಹಸ್ತಾಂತರದ ಲಿಂಕ್‌ಗಳನ್ನು ಪತ್ತೆ ಹಚ್ಚುವ ಕಾರ್ಯ ಪ್ರಗತಿಯಲ್ಲಿದೆ. ಈ ವಿಡಿಯೋವನ್ನು 2026ರ ಸೆಪ್ಟೆಂಬರ್–ಅಕ್ಟೋಬರ್ ಅವಧಿಯಲ್ಲಿ ಯೂಟ್ಯೂಬ್ (YouTube), ಎಕ್ಸ್ (X) ಸೇರಿದಂತೆ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ಅಪ್‌ಲೋಡ್ ಮಾಡಿರುವುದು **ತಾಂತ್ರಿಕ ತನಿಖೆಯಿಂದ ದೃಢಪಟ್ಟಿದೆ.**

ವಿಡಿಯೋ ಅಪ್‌ಲೋಡ್ ಮಾಡಲು ಅನಾಮಧೇಯ ಖಾತೆಗಳನ್ನು ಬಳಸಲಾಗಿದ್ದು, ತಮ್ಮ ಗುರುತು ಮತ್ತು ಸ್ಥಳವನ್ನು ಮರೆಮಾಚಲು ವರ್ಚುವಲ್ ಪ್ರೈವೇಟ್ ನೆಟ್‌ವರ್ಕ್‌ಗಳು (VPN), ಮರೆಮಾಚಲಾದ ಐಪಿ ವಿಳಾಸಗಳು, ವರ್ಚುವಲ್ ಹಾಗೂ ನಕಲಿ ಗುರುತು ಪ್ರದರ್ಶಿಸುವ ಮೊಬೈಲ್ ಸಂಖ್ಯೆಗಳು ಮತ್ತು ಇತರ ಸುಧಾರಿತ ಅನಾಮಧೇಯ ಡಿಜಿಟಲ್ ತಂತ್ರಗಳನ್ನು ಬಳಸಿರುವುದು ಕಂಡುಬಂದಿರುತ್ತದೆ. ಈ ಚಟುವಟಿಕೆಗಳಿಗೆ ಸಂಬಂಧಿಸಿದ ಡಿಜಿಟಲ್ ಜಾಡುಗಳು ಕರ್ನಾಟಕದ ಹೊರಗಿನ ಸ್ಥಳಗಳೊಂದಿಗೆ ಸಂಪರ್ಕ ಹೊಂದಿರುವುದು ತನಿಖೆ ವೇಳೆಯಲ್ಲಿ ಪತ್ತೆಯಾಗಿದೆ.

ವಿದ್ಯುನ್ಮಾನ ಸಾಕ್ಷ್ಯಾಧಾರಗಳ ಪರಿಶೀಲನೆ ಹಾಗೂ ವಿಸ್ತೃತ ತಾಂತ್ರಿಕ ವಿಶ್ಲೇಷಣೆಯ ಮೂಲಕ, ಯೂಟ್ಯೂಬ್‌ನಲ್ಲಿ ವಿಡಿಯೋ ಅಪ್ಲೋಡ್ ಮಾಡಲು ಬಳಸಲಾದ ಮೊಬೈಲ್ ಫೋನ್‌ನ್ನು ತನಿಖಾಧಿಕಾರಿಗಳು ಗುರುತಿಸಿ ಪತ್ತೆಹಚ್ಚಿದ್ದು, ಮುಂದಿನ ತನಿಖೆಯಲ್ಲಿ, ಆ ಮೊಬೈಲ್ ಫೋನ್‌ನ್ನು ದೆಹಲಿಯ ಹಳೆಯ ಹಾಗೂ ನವೀಕರಿಸಿದ ಮೊಬೈಲ್ ಫೋನ್‌ಗಳ ಮಾರಾಟ ಮಳಿಗೆಯಿಂದ ಖರೀದಿಸಿರುವುದು ಪತ್ತೆಯಾಗಿದೆ. ಮೊಬೈಲ್ ಫೋನ್ ಖರೀದಿ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದ ವ್ಯಕ್ತಿಗಳನ್ನೂ ಸಹ ಗುರುತಿಸಲಾಗಿದೆ. ದೆಹಲಿಯ ರಾಷ್ಟ್ರೀಯ ರಾಜಧಾನಿ ಪ್ರದೇಶದಿಂದ (NCR) ಮೊಬೈಲ್ ಫೋನ್ ಖರೀದಿಗೆ ಸಂಬಂಧಿಸಿದ ಆರೋಪಿಗಳಲ್ಲಿ ಒಬ್ಬನನ್ನು 2026ರ ಅಕ್ಟೋಬರ್ 24ರಂದು ಕಾನೂನುಬದ್ಧ ಪ್ರಕ್ರಿಯೆಗಳನ್ನು ಅನುಸರಿಸಿ ಬಂಧಿಸಲಾಗಿದ್ದು, ಬಂಧಿತ ಆರೋಪಿಯನ್ನು ಸಮಗ್ರವಾಗಿ ವಿಚಾರಣೆಗೊಳಪಡಿಸಲಾಗಿದೆ. ವಿಚಾರಣೆ ವೇಳೆಯಲ್ಲಿ ತನಿಖೆಗೆ ಪೂರಕವಾದ ಹಲವು ಮಹತ್ವದ ಸುಳಿವುಗಳು ಸಹ ಲಭ್ಯವಾಗಿವೆ.

ಪ್ರಾಥಮಿಕ ತನಿಖೆಯ ಪ್ರಕಾರ, ಬಂಧಿತ ಆರೋಪಿಯು ಸ್ವತಂತ್ರ ಸಾಮಾಜಿಕ ಜಾಲತಾಣ ವಿಷಯ ಸೃಷ್ಟಿಕರ್ತನಾಗಿ (Freelance Social Media Content Creator) ಕಾರ್ಯನಿರ್ವಹಿಸುತ್ತಿರುವುದು ಕಂಡುಬಂದಿರುವುದಲ್ಲದೇ, ನವದೆಹಲಿಯಲ್ಲಿ ನೆಲೆಸಿರುವ, ಪ್ರಭಾವಿ ರಾಜಕೀಯ ಸಂಪರ್ಕಗಳನ್ನು ಹೊಂದಿರುವ ಕೆಲವು ವ್ಯಕ್ತಿಗಳೊಂದಿಗೆ ಸಂಬಂಧಗಳಿರುವ ಸಾಧ್ಯತೆಯೂ ಕಂಡುಬಂದಿದೆ. ಈ ಸಂಬಂಧಗಳ ಸ್ವರೂಪ, ವ್ಯಾಪ್ತಿ ಹಾಗೂ ಪ್ರಕರಣದೊಂದಿಗೆ ಅವುಗಳಿಗಿರುವ ಪ್ರಸ್ತುತತೆಯ ಕುರಿತು ತನಿಖೆ ಮುಂದುವರಿದಿದೆ.

ಮುಖ್ಯವಾಗಿ, ರಾಜ್ಯದಲ್ಲಿ ಜವಾಬ್ದಾರಿಯುತ ಸ್ಥಾನಗಳನ್ನು ಹೊಂದಿರುವ ವ್ಯಕ್ತಿಗಳ ತೇಜೋವಧೆ ಮಾಡುವ, ಅವರ ಘನತೆ ಮತ್ತು ವಿಶ್ವಾಸಾರ್ಹತೆಗೆ ಧಕ್ಕೆ ತರುವ, ಸಾರ್ವಜನಿಕ ಅಭಿಪ್ರಾಯವನ್ನು ಪ್ರಭಾವಿಸುವ ಹಾಗೂ ರಾಜಕೀಯ ವಿವಾದ ಮತ್ತು ಸಾರ್ವಜನಿಕರಲ್ಲಿ ಭಿನ್ನಾಭಿಪ್ರಾಯಗಳನ್ನು ಸೃಷ್ಟಿಸುವ ಉದ್ದೇಶದಿಂದ ಈ ವಿಡಿಯೋವನ್ನು ಯೋಜಿತವಾಗಿ ಪ್ರಸಾರ ಮಾಡಿರುವ ಸಾಧ್ಯತೆಯನ್ನು ಸೂಚಿಸುವ ಮಹತ್ವದ ಸುಳಿವುಗಳು ತನಿಖೆಯಲ್ಲಿ ಲಭ್ಯವಾಗಿವೆ. ಈ ವಿಡಿಯೋವನ್ನು ದುರುದ್ದೇಶದಿಂದ ಪ್ರಸಾರ ಮಾಡುವ ಸಂಚಿನ ರೂಪುರೇಷೆ ಸಿದ್ಧಪಡಿಸುವುದು, ಅದಕ್ಕೆ ಸಹಕರಿಸುವುದು, ಸಾಮಾಜಿಕ ಜಾಲತಾಣಗಳಲ್ಲಿ ಅಪ್ಲೋಡ್ ಮಾಡುವುದು ಹಾಗೂ ವ್ಯಾಪಕವಾಗಿ ಹರಡುವಂತೆ ಮಾಡುವ ಪ್ರಕ್ರಿಯೆಗಳಲ್ಲಿ ಹಲವು ವ್ಯಕ್ತಿಗಳು ಸಂಘಟಿತರಾಗಿ ಭಾಗಿಯಾಗಿರುವ ಸಾಧ್ಯತೆಯ ಬಗ್ಗೆಯೂ ಕೂಲಂಕುಷ ತನಿಖೆ ನಡೆಸಲಾಗುತ್ತಿದೆ. ಈ ಸಂಬಂಧ ಹೆಚ್ಚಿನ ವಿಚಾರಣೆಗೆ ಒಳಪಡಿಸಬೇಕಾದ ಕೆಲವು ವ್ಯಕ್ತಿಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಅವರಿಗೆ ಕಾನೂನಿನ ರೀತ್ಯಾ ನೋಟಿಸ್‌ಗಳನ್ನು ಜಾರಿಗೊಳಿಸಲಾಗಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವು ವ್ಯಕ್ತಿಗಳ ಗುರುತನ್ನು ತನಿಖಾಧಿಕಾರಿಗಳು ಪತ್ತೆಹಚ್ಚಿದ್ದರೂ, ತನಿಖೆಯ ಸಮಗ್ರತೆಯನ್ನು ಕಾಪಾಡುವ, ಸಾಕ್ಷ್ಯಾಧಾರಗಳಲ್ಲಿ ಹಸ್ತಕ್ಷೇಪವಾಗುವುದನ್ನು ತಡೆಯುವ ಹಾಗೂ ಮುಂದಿನ ತನಿಖಾ ಪ್ರಕ್ರಿಯೆಗೆ ಯಾವುದೇ ಧಕ್ಕೆಯಾಗದಂತೆ ನೋಡಿಕೊಳ್ಳುವ ಉದ್ದೇಶದಿಂದ ಪ್ರಸ್ತುತ ಹಂತದಲ್ಲಿ ಅವರ ಹೆಸರುಗಳನ್ನು ಬಹಿರಂಗಪಡಿಸಲು ಸಾಧ್ಯವಿಲ್ಲವೆಂಬ ಅಂಶವನ್ನು ತಮ್ಮ ಗಮನಕ್ಕೆ ತರಬಯಸಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಧ್ಯಮಗಳಲ್ಲಿ ವರದಿ ಮಾಡುವಾಗ ಅಥವಾ ಸಾರ್ವಜನಿಕವಾಗಿ ಚರ್ಚಿಸುವಾಗ ಮಾಧ್ಯಮ ಸಂಸ್ಥೆಗಳು, ಸಾರ್ವಜನಿಕರು ಹಾಗೂ ಸಾಮಾಜಿಕ ಜಾಲತಾಣ ಬಳಕೆದಾರರು ಸಂಯಮ ಮತ್ತು ಜವಾಬ್ದಾರಿಯಿಂದ ವರ್ತಿಸಬೇಕೆಂದು ಬೆಂಗಳೂರು ನಗರ ಪೊಲೀಸ್ ಇಲಾಖೆ ಮನವಿ ಮಾಡಿಕೊಳ್ಳಲಾಗಿದೆ. ದೃಢೀಕರಿಸದ ಆರೋಪಗಳನ್ನು ಪ್ರಸಾರ ಮಾಡುವುದು, ಅವುಗಳಿಗೆ ಮತ್ತಷ್ಟು ಪ್ರಚಾರ ನೀಡುವುದು ಅಥವಾ ತನಿಖೆ ಪೂರ್ಣಗೊಳ್ಳುವ ಮೊದಲೇ ಆತುರದ ತೀರ್ಮಾನಗಳಿಗೆ ಬರುವುದು ಸಾರ್ವಜನಿಕರನ್ನು ತಪ್ಪುದಾರಿಗೆಳೆಯುವುದರ ಜೊತೆಗೆ, ಪ್ರಗತಿಯಲ್ಲಿರುವ ತನಿಖೆಯ ಮೇಲೂ ಪ್ರತಿಕೂಲ ಪರಿಣಾಮ ಬೀರಬಹುದಾಗಿರುವುದರಿಂದ ಇಂತಹ ಚಟುವಟಿಕೆಗಳಿಂದ ದೂರವಿರಲು ಮನವಿ ಮಾಡಲಾಗುತ್ತಿದೆ.

ಪ್ರಕರಣದ ಸತ್ಯಾಸತ್ಯತೆಯನ್ನು ಸಂಪೂರ್ಣವಾಗಿ ಬಯಲಿಗೆಳೆಯಲು, ಯಾವುದೇ ಅಪರಾಧ ಕೃತ್ಯದಲ್ಲಿ ಭಾಗಿಯಾಗಿರುವ ವ್ಯಕ್ತಿಗಳನ್ನು ಗುರುತಿಸಲು ಹಾಗೂ ತಪ್ಪಿತಸ್ಥರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲು ಬೆಂಗಳೂರು ನಗರ ಪೊಲೀಸ್ ಇಲಾಖೆ ಬದ್ಧವಾಗಿದೆ.